**<u>ಅಸಲು ದಾವಾ 47/2022</u>** ಪಿ.ಡಬ್ಲ್ಯೂ:- **1**

ದಿನಾಂಕಃ **23-06-2023** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ:- ವಾದಿಯ ಪರ ವಕೀಲರಿಂದ:-</u>**

ನಾನು ಈ ದಾವೆಯಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ದಿಃ 25-01-1968 ರ ನೋಂದಾಯಿತ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**1** ಎಂದು, ದಿಃ 11-11-2021 ರಂದು ವಕೀಲರ ಮೂಲಕ ಪ್ರತಿವಾದಿಗಳಿಗೆ ನೀಡಿದ ನೋಟೀಸ್ ನ ಕಚೇರಿ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**2** ಎಂದು, ಅಂಚೆ ರಶೀದಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-**3** ರಿಂದ **7** ಎಂದು, ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-**8** ರಿಂದ **11** ಎಂದು, 5 ನೇ ಪ್ರತಿವಾದಿ ಕಳುಹಿಸಿದ ನೋಟೀಸು ಜಾರಿಯಾಗದೇ ಹಿಂತಿರುಗಿ ಬಂದಿದ್ದು, ಸದರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ಅಂಚೆ ಲಕೋಟೆಯನ್ನು ನಿಪಿ-12 ಎಂದು ಅದರಲ್ಲಿ ಇರುವ ನೋಟೀಸನ್ನು ನಿಪಿ-12(ಎ) ಎಂದು, ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**13** ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.**

**ಓ. ಹೇ. ಕೇ. ಸ. ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಹೊನ್ನಾಳಿ.**